# ಮನುಷ್ಯನಿಗೆ ಅರಿವಿಂದ ಮುಕ್ತಿ ಸಿಗಲು ಸಾಧ್ಯ :ಅದೃಶ್ಯಾನಂದ ಶ್ರೀ



ಯಮಕನಮರಡಿ:-ಪ್ರಕೃತಿ ವಿಕೋಪದಿಂದ ಇಂದು ಅತೀ ಬಿಸಿಲು ಸೇರಿದಂತೆ ನಸರ್ಗದಲ್ಲಿ ವಿವಿಧ ಬದಲಾವಣೆಗಳಾಗುತ್ತಿವೆ ಎಂದು ಚಿಕ್ಕಲದಿನ್ನ ಯ ಶ್ರೀ ಅದೃಶ್ಯಾನಂದ ಮಹಾಸ್ವಾಮಿಗಳು ಹೇಳಿದರು,

ಅವರು ಸಮೀಪದ ಶಹಾಬಂದರ ಗ್ರಾಮದ ಶ್ರೀಸದ್ಗುರು ಬಾಳಯ್ಯಜ್ಜನವರ 33 ನೇ ವರ್ಷದ ಜಾತ್ರಾ ಮಹೋತ್ಸವ ಹಾಗೂ ಸಾಮೂಹಿಕ ವಿವಾಹ ಕಾರ್ಯಕ್ರಮದ ದಿವ್ಯಸಾನಿಧ್ಯ ವಹಿಸಿ ಮಾತನಾಡಿ ಸಮಾಜದ ಸೇವೆಗಾಗಿ ಅನಯಾಗಬೇಕು ಅರಿವೇಯೇ ಗುರು ಎಂಬಂತೆ ಮನಷ್ಯನಗೆ ಅರಿವಿನಂದ ಮುಕ್ತಿ ಸಿದಲು ಸಾಧ್ಯ ಕಾರಣ ಮನುಷ್ಯ ಅರಿವಿನಂದ ಬದುಕಿದಾಗ ಶ್ರೇಷ್ಠನಾಗುತ್ತಾನೆ ಆ ನಟ್ಟಿನಲ್ಲಿ ಅಜ್ಞಾನ ಕತ್ತಲನ್ನು ಕಳೆದು ಭಕ್ತರ ಬಾಳಿನಲ್ಲಿ ಬೆಳಕನ್ನು ಕರುಣಿಸುವ ಶಕ್ತಿ ಗುರುವಿಗಿದೆ ಎಂದರು,

ಶರಣರಾದ ಸದಾಶಿವ ಹಗೆದಾಳ, ಶರಣರಾದ ವಿಠ್ಠಲ, ಪರಸಪ್ಪಾ ನಂದನವಾಡ, ವಿನೋದ ಜಗಜಂಪಿ, ಬಸೀರ ಮುಲ್ಲಾ , ಸೇರಿದಂತೆ ಸುತ್ತಲಿನ ಭಕ್ತಾಧಿಗಳು ಪಾಲ್ಗೊಂಡಿದ್ದರು,

ಜಾತ್ರಾಮಹೋತ್ಸವದಂಗವಾಗಿ ಕರ್ತೃಗದ್ದುಗೆಗೆ ವಿಶೇಷ ಪೂಜೆ, ಶ್ರೀಮಠದಲ್ಲಿ ವಚನಾಭೀಷೇಕ, ಭಜನಾ ಕಾರ್ಯಕ್ರಮಗಳು ನಡೆದವು ದಿ,17 ರಂದು ವಿಶೇಷ ಪ್ರವಚನ ಮಹಾ ಪ್ರಸಾದ ಕಾರ್ಯಕ್ರಮಗಳು ಜರುಗಿದವು,

# ಮೇ.07 ರಂದು ಜಿಲ್ಲೆಯಾದ್ಯಂತ ಪ್ರತಿಬಂಧಕಾಜ್ಞೆ

ಬೆಳಗಾವಿ.ಪ್ರ.: ಬೆಳಗಾವಿ ಜಿಲ್ಲೆಯಲ್ಲಿ ಲೋಕಸಭಾ ಚುನಾವಣೆಯ ಮತದಾನವು ಮೇ. 7 ರಂದು ಜರುಗಲಿದ್ದು, ಜಿಲ್ಲೆಯಾದ್ಯಂತ ಮೇ.5 ಸಂಜೆ 6 ಗಂಟೆಯಿಂದ ಮೇ.8 ರ ಬೆಳಗ್ಗೆ 11 ಗಂಟೆಯವರೆಗೆ ಸಿ.ಆರ್.ಪಿ.ಸಿ 1973 ರ ಕಲಂ 144 ಮತ್ತು ಕರ್ನಾಟಕ ಪೊಲೀಸ್ ಕಾಯ್ದೆ 1963 ರ ಕಲಂ 35 ರಡಿ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿಗಳಾದ ನತೇಶ್ ಪಾಟೀಲ ಅವರು ಪ್ರತಿಬಂಧಕಾಜ್ಞೆಯನ್ನು ವಿಧಿಸಿ ಆದೇಶ ಹೊರಡಿಸಿದ್ದಾರೆ.

ಬೆಳಗಾವಿ ಜಿಲ್ಲೆಯಲ್ಲಿ ಮೇ.7 ರಂದು ಮತದಾನ ಜರುಗಲಿರುವ ಪ್ರಯುಕ್ತ ಬೆಳಗಾವಿ ಜಿಲ್ಲೆಯಾದ್ಯಂತ (01 ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ, 02 ಬೆಳಗಾವಿ ಲೋಕಸಭಾ ಮತಕ್ಷೇತ್ರದ ಹಾಗೂ 12-ಉತ್ತರ ಕನ್ನಡ ಲೋಕಸಭಾ ಮತಕ್ಷೇತ್ರದ ಚನ್ನಮ್ಮನ ಕಿತ್ತೂರು ಮತ್ತು ಖಾನಾಪೂರ ತಾಲೂಕಿನ ವ್ಯಾಪ್ತಿಯಲ್ಲಿ) 05 ಕ್ಕಿಂತ ಹೆಚ್ಚು ಜನರು ಗುಂಪು ಸೇರುವುದು, ಮೆರವಣಿಗೆ ಅಥವಾ ಸಭೆ ಸಮಾರಂಭ ಜರುಗಿಸುವುದನ್ನು ನಿಷೇಧಿಸಿದೆ.

ಚುನಾವಣಾ ಅಭ್ಯರ್ಥಿಗಳು/ ಬೆಂಬಲಿಗರು ಮನೆ ಮನೆಗೆ ತೆರಳಿ ಮತಯಾಚನೆ ಮಾಡಬಹುದಾಗಿದ್ದು ಅದರಲ್ಲಿ 05 ಜನರಿಗಿಂತ ಹೆಚ್ಚಿನ ಸಂಖ್ಯೆಯ ಜನರು ಸೇರತಕ್ಕದ್ದಲ್ಲ.

ಮತದಾರರಲ್ಲದವರು ಚುನಾವಣಾ ಮತಕ್ಷೇತ್ರಗಳ ವ್ಯಾಪ್ತಿಯಿಂದ ಹೊರಗೆ ಹೋಗತಕ್ಕದ್ದು, ಶಸ್ತ್ರ, ಬಡಿಗೆ, ಬರ್ಚಿ, ಖಡ್ಗ, ಬಂದೂಕು, ಚೂರಿ, ಲಾಠಿ, ಡೊಣ್ಣೆ, ಚಾಕು ಅಥವಾ ದೇಹಕ್ಕೆ ಅಪಾಯವನ್ನು ಉಂಟು ಮಾಡಬಹುದಾದ ಯಾವುದೇ ಮಾರಕಾಸ್ತ್ರವನ್ನು ತೆಗೆದುಕೊಂಡು ಹೋಗುವುದನ್ನು ಮತ್ತು ತಿರುಗಾಡುವುದನ್ನು ಪ್ರತಿಬಂಧಿಸಲಾಗಿದೆ.

ಕಲ್ಲುಗಳನ್ನು, ಕ್ಷಾರಪಧಾರ್ಥ ಇಲ್ಲವೆ ಸ್ಫೋಟಕ ವಸ್ತುಗಳು ಯಾವುದೇ ದಾಹಕ ವಸ್ತುಗಳು ಇತ್ಯಾದಿಗಳನ್ನು ಸದರಿ ಸ್ಥಳಕ್ಕೆ ತೆಗೆದುಕೊಂಡು ಹೋಗುವುದನ್ನು ಹಾಗೂ ಶೇಖರಿಸುವುದನ್ನು ನಿಷೇಧಿಸಲಾಗಿದೆ.

ಕಲ್ಲುಗಳನ್ನು ಮತ್ತು ಎಸೆಯುವಂಥಹ ವಸ್ತುಗಳನ್ನು ಎಸೆಯುವ ಅಥವಾ ಬಿಡುವ ಸಾಧನಗಳನ್ನು ತೆಗೆದುಕೊಂಡು ಹೋಗುವುದನ್ನು ನಿಷೇಧಿಸಲಾಗಿದೆ.

ಮನುಷ್ಯ ಶವಗಳ ಅಥವಾ ಅವುಗಳ ಆಕೃತಿ ಅಥವಾ ಪ್ರತಿಮೆಗಳನ್ನು ಪ್ರದರ್ಶನ ಮಾಡುವುದನ್ನು ಪ್ರತಿಬಂಧಿಸಲಾಗಿದೆ.

ಸದರಿ ಸ್ಥಳದಲ್ಲಿ ಬಹಿರಂಗವಾಗಿ ಘೋಷಣೆ ಮಾಡುವುದು, ಪದ ಹಾಡುವುದು, ವಾದ್ಯ ಬಾರಿಸುವುದು, ವ್ಯಾಖ್ಯಾನ ಕೊಡುವುದು, ಸನ್ನೆ ಅಥವಾ ನಕಲಿ ಪ್ರದರ್ಶನವನ್ನು ಹಾಗೂ ಸಾರ್ವಜನಿಕ ಸಭ್ಯತೆ ಅಥವಾ ನೀತಿಯನ್ನು ಆಕ್ರಮಿಸಬಹುದಾದ ಕೃತ್ಯಗಳನ್ನು ಮಾಡುವುದನ್ನು ನಿಷೇಧಿಸಲಾಗಿದೆ.

ಸಾರ್ವಜನಿಕವಾಗಿ ಯಾವುದೇ ವ್ಯಕ್ತಿ ಪ್ರಚೋದನಾತ್ಮಕ ಹಾಗೂ ಉದ್ರೇಕಕಾರಿ ಹಾಡುಗಳು, ಕೂಗಾಟ ಮಾಡುವುದನ್ನು ಹಾಗೂ ವ್ಯಕ್ತಿಗಳ ತೇಜೋವಧೆ ಮಾಡುವಂತಹ ಚಿತ್ರಗಳು, ಚಿಹ್ನೆಗಳು, ಪ್ರತಿಕೃತಿಗಳು ಮುಂತಾದವುಗಳನ್ನು ಪ್ರದರ್ಶಿಸುವುದಾಗಲಿ ಹಾಗೂ ಸಾರ್ವಜನಿಕರ ಗಾಂಭೀರ್ಯ ಹಾಗೂ ನೈತಿಕತೆಗೆ ಭಂಗ ತರುವಂತಹ ಅಥವಾ ಕಾನೂನು ಮತ್ತು ಸುವ್ಯವಸ್ಥೆಗೆ ಭಂಗ ತರುವಂತಹ ಯಾವುದೇ ಕೃತ್ಯಗಳಲ್ಲಿ ತೊಡಗುವುದನ್ನು ನಿಷೇಧಿಸಲಾಗಿದೆ.

ಯಾವುದೇ ವ್ಯಕ್ತಿ ಸಾರ್ವಜನಿಕರಾಗಲಿ ಮೇಲೆ ವಿವರಿಸಿದ ಮಾರಕಾಸ್ತ್ರಗಳು, ಸ್ಫೋಟಕ ವಸ್ತುಗಳು, ವಿನಾಶಕಾರಿ ವಸ್ತುಗಳು ಹಾಗೂ ಇತರ ಆಕ್ಷೇಪಾರ್ಹ ವಸ್ತುಗಳನ್ನು ಹೊಂದಿದ್ದು ಕಂಡುಬಂದ ಕೂಡಲೇ ಅವುಗಳನ್ನು ವಶಪಡಿಸಿಕೊಳ್ಳಲು ಯಾವುದೇ ಪೊಲೀಸ್ ಅಧಿಕಾರಿಗಳಿಗೆ ಅಧಿಕಾರ ಇರುತ್ತದೆ. ಅಂಥಹ ಮಾರಕಾಸ್ತ್ರಗಳನ್ನು ಸರಕಾರಕ್ಕೆ ಮುಟ್ಟುಗೋಲು ಮಾಡಿಕೊಳ್ಳಲಾಗುವುದು. ಅಲ್ಲದೇ ಸಂಬಂಧಿಸಿದ ವ್ಯಕ್ತಿಗಳ ಮೇಲೆ ಕಾನೂನು ರೀತ್ಯ ಕ್ರಮ ಜರುಗಿಸಲಾಗುವುದು.

ಶವ ಸಂಸ್ಕಾರಕ್ಕೆ ಅಥವಾ ಮದುವೆ ಮತ್ತು ಧಾರ್ಮಿಕ ಮೆರವಣಿಗೆಗಳಿಗೆ ಈ ಆಜ್ಞೆ ಅನ್ವಯಿಸುವುದಿಲ್ಲ. ಮದುವೆ ಮತ್ತು ಇತರೆ ಧಾರ್ಮಿಕ ಮೆರವಣಿಗೆಗಳು ಯಾವತ್ತೂ ಚುನಾವಣಾ ನೀತಿ ಸಂಹಿತೆ ಉಲ್ಲಂಘನೆಯಾಗದಂತೆ ಹಾಗೂ ಕಾನೂನು ಮತ್ತು ಸುವ್ಯವಸ್ಥೆಗೆ ಧಕ್ಕೆ ತರದಂತೆ ನಿಯಮಗಳನ್ನು ಪಾಲಿಸುವುದು.

ಸದರಿ ಆದೇಶವನ್ನು ಉಲಂಘಿಸುವವರ ವಿರುದ್ಧ ಭಾರತೀಯ ದಂಡ ಸಂಹಿತೆಯ ಕಲಂ 188 ರ ಪ್ರಕಾರ ಕ್ರಮವನ್ನು ಜರುಗಿಸಲಾಗುವುದು. ಈ ಆದೇಶವು ಮತದಾನ ಸಿಬ್ಬಂದಿ ಮತ್ತು ಅಧಿಕಾರಿಗಳಿಗೆ ಅಥವಾ ಪೊಲೀಸ್ ಅಧಿಕಾರಿಗಳಿಗೆ ಹಾಗೂ ಚುನಾವಣಾ ಕಾರ್ಯ ನಿರತ ಸಿಬ್ಬಂದಿ ಮತ್ತು ಅಧಿಕಾರಿಗಳಿಗೆ ಹಾಗೂ ಒಬ್ಬೊಬ್ಬರಾಗಿ ಮತಗಟ್ಟೆಗಳಿಗೆ ತೆರಳಿ ಮತದಾನ ಮಾಡುವ ಮತದಾರರಿಗೆ ಅನ್ವಯಿಸುವುದಿಲ್ಲ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ನತೇಶ ಪಾಟೀಲ ಅವರು ಆದೇಶದಲ್ಲಿ ತಿಳಿಸಿದ್ದಾರೆ.

# ಹಿಡಕಲ್ ಡ್ಯಾಂ ಬಿ,ಜೆ,ಪಿ,ಯಿಂದ ಕಾಂಗ್ರೇಸ್ ಸೇರ್ಪಡೆ



ಯಮಕನಮರಡಿ:-ಹಿಡಕಲ್ ಡ್ಯಾಂ ನ ಯುವ ಧುರೀಣರಾದ ರಾಜು ಗಳಾಟೆ ಅವರ ನೇತೃತ್ವದಲ್ಲಿ ಹುಕ್ಕೇರಿ ವಿಧಾನಸಭಾ ಮತಕ್ಷೇತ್ರದ ಬಿ,ಜೆ,ಪಿ, ಕಾರ್ಯ ಕರ್ತರು ಕಾಂಗ್ರೇಸ್ ಪಕ್ಷಕ್ಕೆ ಸೇರ್ಪಡೆಯಾದರು ಹಿಡಕಲ್ ಡ್ಯಾಂ ಹೊಸಪೇಟ ಗ್ರಾಮ ಪಂಚಾಯತ ಅಧ್ಯಕ್ಷೆ ಸುಹಾಸಿನ ಮಗದುಮ್ಮ, ಸದಸ್ಯರಾದ ರೇಣುಕಾ ಬೂದಿಹಾಳ, ಸದಾನಂದ ಮಳ್ಯಾಗೋಳ, ರಮೇಶ ಹುರಳಿ, ಅರ್ಜುನ ನೆಸರಗಿ, ಚಂದ್ರಪ್ಪಾ ಮಾದರ, ಗಣೇಶ ಚಿಂಚಿ ಸುಶಾಂತ ಮಗದುಮ್ಮ ಸೇರಿದಂತೆ ಹಲವಾರು ಕಾರ್ಯಕರ್ತರು ಬಿ,ಜೆ,ಪಿ, ಪಕ್ಷವನ್ನು ತೊರೆದು ಮಾಜಿ ಸಚಿವ ಎ,ಬಿ,ಪಾಟೀಲ,

ಹಾಗೂ ಶಶಿಕಾಂತ ನಾಯಿಕ ಅವರ ನೇತೃತ್ವದಲ್ಲಿ ಸಚಿವ ಸತೀಶ ಜಾರಕಿಹೊಳಿ ಕೈ ಬಲಪಡಿಸಲು ಕಾಂಗ್ರೆಸ್ಸ್ ಪಕ್ಷಕ್ಕೆ ಸೇರ್ಪಡೆಯಾದರು, ಈ ಸಂದರ್ಭದಲ್ಲಿ ಮಾಜಿ ಸಚಿವ ಎ,ಬಿ,ಪಾಟೀಲ, ಮಹೇಶ ಪಾಟೀಲ, ಶಿವಲಿಂಗ ನೇಸರಗಿ, ಅಜಿತ ಮಾದರ, ಸುಶಾಂತ ಮಗದುಮ್ಮ, ಅಡಿವೆಪ್ಪ ಖೋಡಿ, ಗಣೇಶ ಚಿಂಚಿ ಮುಂತಾದವರು ಉಪಸ್ಥಿತರಿದ್ದರು,

# ರಾಮದುರ್ಗದಲ್ಲಿ ಕಾಂಗ್ರೆಸ್‌ಗೆ ಮುನ್ನಡೆ ಖಚಿತ: ಶಾಸಕ ಅಶೋಕ್ ಪಟ್ಟಣ

## ಕಾಂಗ್ರೆಸ್ ಅಭ್ಯರ್ಥಿ ಪರ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್, ಅಶೋಕ ಪಟ್ಟಣ ಭರ್ಜರಿ ಪ್ರಚಾರ




ರಾಮದುರ್ಗ: ಬಿಜೆಪಿಯವರು ಎಷ್ಟೇ ಅಬ್ಬರಿಸಿದರೂ ರಾಮದುರ್ಗ ವಿಧಾನಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಅವರಿಗೆ ಮುನ್ನಡೆ ಸಿಗುವುದು ಖಚಿತ. ಕಾಂಗ್ರೆಸ್ ಅಭ್ಯರ್ಥಿ ಪರ ಕ್ಷೇತ್ರದಾದ್ಯಂತ ಉತ್ತಮ ವಾತಾವರಣ ನಿರ್ಮಾಣವಾಗಿದೆ ಎಂದು ಶಾಸಕ ಹಾಗೂ ವಿಧಾನಸಭೆಯ ಮುಖ್ಯ ಸಚೇತಕ ಅಶೋಕ್ ಪಟ್ಟಣ್ ಹೇಳಿದರು.

ರಾಮದುರ್ಗ ವಿಧಾನಸಭಾ ಕ್ಷೇತ್ರದ ಸಾಲಹಳ್ಳಿಯಲ್ಲಿ ಗುರುವಾರ ನಡೆದ ಹುಲಕುಂದ ಹಾಗೂ ಬಟಕುರ್ಕಿ ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಕಾಂಗ್ರೆಸ್ ಕಾರ್ಯಕರ್ತರ ಸಮಾವೇಶದಲ್ಲಿ ಮಾತನಾಡಿದ ಶಾಸಕರು, ರಾಮದುರ್ಗದಿಂದ 20 ರಿಂದ 25 ಸಾವಿರ ಮತಗಳು ಮುನ್ನಡೆ ಸಿಗುವುದು ಗ್ಯಾರಂಟಿ. ಕ್ಷೇತ್ರದಲ್ಲಿ ಒಗ್ಗಟಾಗಿ ಕೆಲಸ ಮಾಡಿ, ಮುನ್ನಡೆ ನೀಡೋಣ ಎಂದರು.

ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರ ಪುತ್ರ ಎಂದು ಮೃಣಾಲ್ ಅವರನ್ನು ಕಣಕ್ಕಿಳಿಸಿಲ್ಲ. ಕಳೆದ 11 ವರ್ಷಗಳಿಂದ ಪಕ್ಷದ ಯುವ ಘಟಕದಲ್ಲಿ ಕೆಲಸ ಮಾಡಿದ್ದು, ಕ್ಷೇತ್ರದ ಜನರೊಂದಿಗೆ ಉತ್ತಮ ಒಡನಾಟ ಹೊಂದಿದ್ದಾರೆ. ಜೊತೆಗೆ ಅವರ ಸಮಾಜಮುಖಿ ಕೆಲಸಗಳನ್ನು ಗುರುತಿಸಿ ಟಿಕೆಟ್ ನೀಡಲಾಗಿದೆ. ಮೃಣಾಲ್ ಹೆಬ್ಬಾಳ್ಕರ್ ವಿದ್ಯಾವಂತನಾಗಿದ್ದು, ಕ್ಷೇತ್ರದ ಪರ ಕಾಳಜಿ ಹೊಂದಿದ್ದಾನೆ ಎಂದು ಶಾಸಕರ ಅಶೋಕ್ ಪಟ್ಟಣ್ ಹೇಳಿದರು.

ಸಚಿವರಾಗುವ ಕನಸಿನಲ್ಲಿ ಬಿಜೆಪಿ ಅಭ್ಯರ್ಥಿಗಳು

ಅಭಿವೃದ್ಧಿ ಬಗ್ಗೆ ಕಿಂಚಿತ್ತೂ ಯೋಚಿಸದ ಬಿಜೆಪಿಯವರಿಗೆ ಅಧಿಕಾರ ದಾಹ ಮಾತ್ರ ನಿಂತಿಲ್ಲ. ಕೇಂದ್ರದಲ್ಲಿ ಎನ್ ಡಿಎ ಅಧಿಕಾರಕ್ಕೆ ಬಂದರೆ ಸಚಿವರಾಗಲು ರಾಜ್ಯದಿಂದ ದೊಡ್ಡ ದಂಡೇ ರೆಡಿ ಆಗುತ್ತಿದೆ. ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಕೂಡ ಗೆದ್ದರೆ ಸಚಿವ ಆಗ್ತಿನ ಅಂತ ಮತ ಹೇಳುತ್ತಿದ್ದಾರೆ. ಪ್ರಹ್ಲಾದ್ ಜೋಶಿ, ಬಸವರಾ ಬೊಮ್ಮಾಯಿ, ಶೋಭಾ ಕರಂದ್ಲಾಜೆ ಸೇರಿದಂತೆ ಸ್ಪರ್ಧಿಸಿರುವ ಎಲ್ಲರೂ ಸಚಿವರಾಗುತ್ತೇವೆ ಎನ್ನುತ್ತಿದ್ದಾರೆ. ಈ ಹಿಂದೆ ಕ್ಷೇತ್ರದ ಅಭಿವೃದ್ಧಿಗೆ ಸಹಕರಿಸದ ವ್ಯಕ್ತಿ ಇಂದು ಬೆಳಗಾವಿಯಲ್ಲಿ ಮತ ಕೇಳಲು ನೈತಿಕತೆ ಇದೆಯೇ ಎಂದು ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ಪ್ರಶ್ನಿಸಿದರು.ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ತನ್ನದೇ ಕನಸು ಕಂಡಿರುವ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್, ನನ್ನ ಹಾಗೂ ಜಿಲ್ಲೆಯ ಶಾಸಕರ ಸಹಕಾರದೊಂದಿಗೆ ಕೆಲಸ ಮಾಡಲಿದ್ದಾನೆ. ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರದಲ್ಲಿ ಇರುವುದರಿಂದ ಕ್ಷೇತ್ರದ ಅಭಿವೃದ್ಧಿಗೆ ಮತ್ತಷ್ಟು ಸಹಕಾರಿಯಾಗಲಿದೆ ಎಂದು ಸಚಿವರು ಹೇಳಿದರು. ಈ ವೇಳೆ ಕಾಂಗ್ರೆಸ್ ಮುಖಂಡರಾದ ಪ್ರದೀಪ್ ಪಟ್ಟಣ್, ಹಾಸ್ಯ ಕಲಾವಿದ ರಾಜು ತಾಳಿಕೋಟೆ, ಕೆಪಿಸಿಸಿ ಸದಸ್ಯರಾದ ರಾಜೇಂದ್ರ ಪಾಟೀಲ್, ಸುರೇಶ್ ಪತ್ತ್ಯಾಪುರ, ರಾಮದುರ್ಗ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಸೋಮಶೇಖರ ಶಿದ್ದಲಿಂಗಪ್ಪನವರ್, ಮುಂಬಾ ರೆಡ್ಡಿ, ಹನುಮಂತ ವಡ್ಡರ ಸೇರಿದಂತೆ ಹಲವು ಮಂದಿ ಉಪಸ್ಥಿತರಿದ್ದರು.

# ಮುಂಡರಗಿ ತಾಪಂ ವಿಶಿಷ್ಟ ನಡೆ: ಮದುವೆ ಮನೆಯಲ್ಲಿ ಮತದಾನ ಜಾಗೃತಿ




ಗದಗ ಏಪ್ರಿಲ್ 19: ಪಟ್ಟಣದ ಶಾದಿಮಹಲ್ಲಿನಲ್ಲಿ ಶುಕ್ರವಾರ ಏರ್ಪಡಿಸಿದ್ದ ನದಾಫ-ಹರ್ಲಾಪೂರ ಕುಟುಂಬದ ಮದುವೆ ಸಮಾರಂಭದಲ್ಲಿ ತಾಲೂಕು ಪಂಚಾಯಿತಿಯ ಸರ್ವ ಸಿಬ್ಬಂದಿಗಳು ಕಾರ್ಯನಿರ್ವಾಹಕ ಅಧಿಕಾರಿ ವಿಶ್ವನಾಥ ಹೊಸಮನಿ ನೇತೃತ್ವದಲ್ಲಿ ಭಾಗವಹಿಸಿ ಮದುವೆ ಮಂಟಪದಲ್ಲಿ0ತೆ?? ಕಡ್ಡಾಯ ಮತದಾನದ ಬಗ್ಗೆ ಜಾಗೃತಿ ಮೂಡಿಸಿದರು.

ಕಲಕೇರಿ ಗ್ರಾಮದ ಯಮನೂರಸಾಬ ಅವರ ಜೊತೆ ಜಹೀದಾಬೇಗಂ ನವಜೀವನಕ್ಕೆ ಕಾಲಿಟ್ಟರು. ಈ ವೇಳೆ ತಾಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಸಿಬ್ಬಂದಿ ಮದುವೆಗೆ ಬಂದ ಬಂಧುಗಳಲ್ಲಿ ವಧು ವರರ ಜೊತೆ ವೇದಿಕೆಯ ಮೇಲಿನಿಂದಲೇ ಮತದಾನದ ಕುರಿತು ಜಾಗೃತಿ ಮೂಡಿಸಿದರು.

ತಾಪಂ ಇಓ ವಿಶ್ವನಾಥ ಹೊಸಮನಿ ಮಾತನಾಡಿ, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರತಿಯೊಬ್ಬರೂ ಕಡ್ಡಾಯವಾಗಿ ಮತದಾನ ಮಾಡುವ ಮೂಲಕ ಉತ್ತಮ ನಾಯಕರನ್ನು ಆ0ತೆ?ಕು ಮಾಡುವ ಅವಕಾಶ ನಮ್ಮದಾಗಿದೆ. ಪ್ರತಿಯೊಬ್ಬರು ಹಕ್ಕು ಚಲಾಯಿಸಿ, ಸಂವಿಧಾನದ ಆಶಯ ಮತ್ತು ಪ್ರಜಾಪ್ರಭುತ್ವ ಯಶಸ್ವಿಗೊಳಿಸಬೇಕು. ಯಾವುದೇ ರೀತಿ ಮತದಾನದಿಂದ ದೂರ ಉಳಿಯಬಾರದು ಎಂದರು.

ವಧು-ವರರಿಗೆ ಹಾಗೂ ಮದುವೆಗೆ ಹಾಜರಾದವರಿಗೆ ಚುನಾವಣೆಯಲ್ಲಿ ಮತದಾನ ನಮ್ಮ ಹಕ್ಕು ಪ್ರತಿಯೊಬ್ಬರೂ ತಪ್ಪದೆ ಮತದಾನ ಮಾಡಬೇಕೆಂದು ಪ್ರತಿಜ್ಞಾ ವಿಧಿ ಬೋಧಿಸಲಾಯಿತು.

ಪಿಡಿಓ ಫಕ್ರುದ್ದೀನ್ ನಧಾಪ, ಸಂತೋಷ ಮೇಟಿ, ಅಕ್ಕಮಹಾದೇವಿ ರುದ್ರೇಶ್ವರಮಠ, ತಾಪಂ ಸಿಬ್ಬಂದಿಗಳಾದ ಎಚ್.ಎಂ ಕಾತರಕಿ, ಸಿ. ಬಿ ಪಾಟೀಲ, ಅಶೋಕ ಅಣ್ಣಿಗೇರಿ, ಸಿದ್ದು ಮಡಿವಾಳರ, ಮೋಹನ ಹೊಂಬಳ ಹಾಗೂ ವಿವಿಧ ಗ್ರಾಮ ಪಂಚಾಯತ ಸಿಬ್ಬಂದಿ ಸೇರಿದಂತೆ ಇತರರಿದ್ದರು.

# ವ್ಯಕ್ತಿ ಕಾಣೆ

ಬೆಳಗಾವಿ.ಪ್ರ.: ಬೆಳಗಾವಿ ಜಿಲ್ಲೆಯ ರಾಯಬಾಗ ತಾಲೂಕಿನ ಹಿಡಕಲ್ ಗ್ರಾಮದ ಭೂಪಾಲ ಚಿದಾನಂದ ಗಲಗಲಿ ಎಂಬಾತ ಏ.1 ರಂದು



ಮನೆಯಿಂದ ಯಾರಿಗೂ ಹೇಳದೆ ಎಲ್ಲಿಯೋ ಹೋಗಿ ಕಾಣೆಯಾಗಿದ್ದಾನೆ ಎಂದು ಕಾಣೆಯಾದ ವ್ಯಕ್ತಿಯ ಪತ್ನಿ ಲಕ್ಷ್ಮೀ ಬೂಪಾಲ ಗಲಗಲಿ ಅವರು ಹಾರೂಗೇರಿ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.

ಕಾನೆಯಾದ ವ್ಯಕ್ತಿ ಚಹರೆ: ವಯಸ್ಸು 28, 5 ಪೂಟ್ 4ಇಂಚ್ ಎತ್ತರ, ಸದೃಢ ಮೈಕಟ್ಟು, ಗೋದಿಕೇಂಪು ಮೈಬಣ್ಣ, ಕೋಲು ಮೂಖ, ತೀಳಿ ನೀಲಿ ಬಣ್ಣದ ಟಿ-ಶರ್ಟ್ ಹಾಗೂ ನೀಲಿ ಬಣ್ಣದ ಜಿನ್ಸ್ ಪ್ಯಾಮಟ್ ಧರಿಸಿರುತ್ತಾನೆ.

ಸದರಿ ಕಾಣೆಯಾದ ವ್ಯಕ್ತಿ ಬಗ್ಗೆ ಮಾಹಿತಿ ಸಿಕ್ಕಲ್ಲಿ ದೂರವಾಣಿ: 8431984124 ಸಂಖ್ಯೆಗೆ ಸಂಪರ್ಕಿಸಬಹುದು ಎಂದು ಹಾರೂಗೇರಿ ಪೊಲೀಸ್ ಠಾಣೆಯ ಠಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಲು ಗುರಿ ಮುಖ್ಯ- ಜಿನೇಂದ್ರ ಖನಗಾಂವಿ



ಬೆಳಗಾವಿ. ಪ್ರ.: : ವಿದ್ಯಾರ್ಥಿಗಳು ಜೀವನದಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಲು ನಿರ್ಧಿಷ್ಟವಾದ ಗುರಿ ಹೊಂದುವುದು ಮುಖ್ಯವಾಗಿದೆ ಎಂದು ಹಿರಿಯ ಐಪಿಎಸ್ ಅಧಿಕಾರಿ ಜಿನೇಂದ್ರ ಖನಗಾಂವಿ ಅವರು ಅಭಿಪ್ರಾಯಪಟ್ಟರು.

ಬೆಳಗಾವಿಯ ಗೋಗಟೆ ಕಾಲೇಜಿನ ಕೆ.ಕೆ.ವೇಣುಗೋಪಾಲ ಸಭಾಗೃಹದಲ್ಲಿ ಬುಧವಾರದಂದು ಜೈನ ಇಂಟರ್‌ನ್ಯಾಷನಲ್ ಟ್ರೇಡ್ ಆರ್ಗನೈಝೇಶನ ಜಿತೋ ಸಂಸ್ಥೆಯ ವತಿಯಿಂದ ಆಯೋಜಿಸಲಾದ ಯಿಪಿಎಸ್‌ಸಿ ಸ್ಪರ್ಧಾತ್ಮಕ ಪರೀಕ್ಷೆಗಳ ಸಿದ್ದತೆ ಕುರಿತು ಮಾರ್ಗದರ್ಶನ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿದ ಅವರು, ವಿದ್ಯಾರ್ಥಿಗಳಿಗೆ ಯುಪಿಎಸ್‌ಸಿ ಪರೀಕ್ಷೆ ಎಂದರೆ ಅತೀ ಕಠಿಣವಾದ ಪರೀಕ್ಷೆ ಎಂಬ ಮನೋಭಾವನೆ ಮೂಡಿದೆ. ಈ ಪರೀಕ್ಷೆ ಬರೆಯಲು ಇಂಗ್ಲಿಷ ಭಾಷೆ ಕಡ್ಡಾಯವಾಗಿ ಬರಲೇಬೆಕೆಂಬ ತಪ್ಪು ಮಾಹಿತಿ, ಹಾಗೂ ಇದು ನನ್ನಿಂದ ಸಾಧ್ಯವಾಗುವುದಿಲ್ಲ ಎಂಬ ಮಾನಸಿಕತೆ ಇರುವುದು . ಇಂತಹ ಅಂಶಗಳು ಇರುವುದರಿಂದ ವಿದ್ಯಾರ್ಥಿಗಳು ಯುಪಿಎಸ್‌ಸಿ ಪರೀಕ್ಷೆ ಬರೆಯಲು ಹಿಂಜರೆಯುತ್ತಿದ್ದಾರೆ ಎಂದು ಅವರು ತಿಳಿಸಿದರು.

ಯುಪಿಎಸ್‌ಸಿ ಪರೀಕ್ಷೆಯನ್ನು ಎದುರಿಸಲು ಸ್ವಲ್ಪ ಶ್ರಮ ವಹಿಸಬೇಕು. ದಿನನಿತ್ಯದ ಆಗುಹೋಗುಗಳ ಬಗ್ಗೆ ಮಾಹಿತಿ ಹೊಂದಬೇಕು. ಪ್ರತಿದಿನ ಪತ್ರಿಕೆ ಓದಬೇಕು. ಶಾಲಾದಿನಗಳಲ್ಲಿ ಕಲಿತ ಇತಿಹಾಸ, ಸಾಮಾಜಿಕ ವಿಷಯಗಳನ್ನು ಮತ್ತೆ ನೆನೆಪಿಸಿಕೊಳ್ಳುವುದು ಸೇರಿದಂತೆ ನಾನು ಪರೀಕ್ಷೆಯನ್ನು ಬರೆಯುತ್ತೇನೆ ಎಂಬ ಛಲ ಮತ್ತು ಗುರಿ ಹೊಂದಿರಬೇಕೆಂದು ಅವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿದ ಐಆರ್‌ಎಸ್ ಅಧಿಕಾರಿ ಅಜಯಕುಮಾರ ಜೈನ ಅವರು ಮಾತನಾಡಿ, ಯುಪಿಎಸ್‌ಸಿ ಪರೀಕ್ಷೆಗಳನ್ನು ಎದುರಿಸುವಾಗ ಯಾವುದೇ ಮಾನಸಿಕ ಒತ್ತಡವನ್ನು ತೆಗೆದುಕೊಳ್ಳಬಾರದು. ದಿನನಿತ್ಯ 8 ರಿಂದ 10 ಗಂಟೆಯವರೆಗೆ ಓದುವುದನ್ನು ರೂಢೀ ಮಾಡಿಕೊಳ್ಳಬೇಕು. ಜೈನ ಸಮಾಜದ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಉನ್ನತ ಹುದ್ದೆಗಳನ್ನು ಅಲಂಕರಿಸಬೇಕೆಂಬ ಉದ್ದೇಶದಿಂದ ಜಿತೋ ಸಂಸ್ಥೆಯು ತರಬೇತಿ ಕಾರ್ಯಕ್ರಮಗಳನ್ನು ನಡೆಸುತ್ತ ಬಂದಿದೆ. ಈ ಕಾರ್ಯಕ್ರಮ ಅತ್ಯುತ್ತಮ ಕಾರ್ಯಕ್ರಮವಾಗಿದ್ದು, ಈ ತರಬೇತಿ ಕಾರ್ಯಕ್ರಮದ ಸದುಪಯೋಗವನ್ನು ಎಲ್ಲರೂ ಪಡೆದುಕೊಳ್ಳಬೇಕೆಂದು ಅವರು ಹೇಳಿದರು. ಸಮಾರಂಭದಲ್ಲಿ ಜೆ.ಎ.ಟಿ.ಎಫ್.ಕೆಕೆಜಿ ವಲಯ ಸಂಯೋಜಕ ಮಹೇಶ ನಾಹರ, ಜೆ.ಎ.ಟಿ.ಎಫ್ ಕೆಕೆಜಿ ವಲಯ ಚೇರಮನ್ ರಮೇಶಚಂದ್ರ ಬೋಹರಾ, ಜೆ.ಎ.ಟಿ.ಎಫ್. ಅಪೆಕ್ಸ ಉಪಾಧ್ಯಕ್ಷ ವಿಕ್ರಮ ಜೈನ ಕೆಕೆಜಿ ಚೇರಮನ್ ಅಶೋಕ ಸಲೇಚಾ, ಧರ್ಮೇಂದ್ರಕುಮಾರ ಜೈನ, ಸಂತೋಷ ಪೋರವಾಲ, ಸಿಎ ರಾಜೇಶ ಮೆಹತಾ ಇವರು ಮಾತನಾಡಿದರು. ಜಿತೋ ಶೈಕ್ಷಣಿಕ ಸಾಲ ಸೌಲಭ್ಯ ಯೋಜನೆ ಕುರಿತು ಪುಷ್ಪಕ ಹನಮಣ್ಣವರ ಮಾಹಿತಿ ನೀಡಿದರು.

ಜಿತೋ ಬೆಳಗಾಂ ಚೇರಮನ್ ವೀರಧವಲ ಉಪಾಧ್ಯೆ ಅತಿಥಿಗಳನ್ನು ಸ್ವಾಗತಿಸಿದರು. ಜೆ.ಎ.ಟಿ.ಎಫ್. ಬೆಳಗಾವಿ ವಿಭಾಗದ ಸಂಯೋಜಕ ಕುಂತಿನಾಥ ಕಲಮನಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯದರ್ಶಿ ಅಶೋಕ ಕಟಾರಿಯಾ ಅತಿಥಿಗಳನ್ನು ಪರಿಚಯಿಸಿದರು. ಸಂಯೋಜಕ ಭೂಷಣ ಮೊಹಿರೆ ವಂದಿಸಿದರು.

# ಏಕಂ ಸನಾತನ ಭಾರತ ದಳದ ಅಭ್ಯರ್ಥಿಯಾಗಿ ವಿಶ್ವನಾಥ ಶೀರಿ ನಾಮಪತ್ರ ಸಲ್ಲಿಕೆ



ಗದಗ : ಹಾವೇರಿ-ಗದಗ ಲೋಕಸಭಾ ಕ್ಷೇತ್ರದಿಂದ ಏಕಂ ಸನಾತನ ಭಾರತ ದಳದ ಅಭ್ಯರ್ಥಿಯಾಗಿ ವಿಶ್ವನಾಥ ಶೀರಿ ಅವರು ಬುಧವಾರ ನಾಮಪತ್ರ ಸಲ್ಲಿಸಿದರು. ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ರಘುನಂದನ್ ಮೂರ್ತಿ ಅವರಿಗೆ ವಿಶ್ವನಾಥ ಶೀರಿ ಅವರು ಒಂದು ಸೆಟ್ ನಾಮಪತ್ರ ಸಲ್ಲಿಸಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಹಾಗೂ ಸಹಾಯಕ ಚುನಾವಣಾಧಿಕಾರಿ ಪೂಜಾರ ವೀರಮಲ್ಲಪ್ಪ, ನಾಗರಾಜ ಸೂರಣಗಿ, ಕಿರಣ ಕಬಾಡಿ, ಶ್ರೀಕಾಂತ ಜವಳಿ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

# ಸಂವಿಧಾನ ಶಿಲ್ಪಿ ಬಾಬಾಸಾಹೇಬ್ ಡಾ. ಬಿ.ಆರ್. ಅಂಬೇಡ್ಕರ್ ಅವರ 133ನೇ ಜನ್ಮದಿನಾಚರಣೆ ಆಚರಣೆ



ಧಾರವಾಡ: ಆಜಾದ್ ಮಜದೂರ್ ಕಿಸಾನ್ ಪಕ್ಷ ಕರ್ನಾಟಕ, ವತಿಯಿಂದ ಸಂವಿಧಾನ ಶಿಲ್ಪಿ ಬಾಬಾಸಾಹೇಬ್ ಡಾ. ಬಿ.ಆರ್. ಅಂಬೇಡ್ಕರ್ ಅವರ 133ನೇ ಜನ್ಮದಿನಾಚರಣೆ ಆಚರಿಸಲಾಯಿತು.

ಪಕ್ಷದ ರಾಜ್ಯಾಧ್ಯಕ್ಷ ಪ್ರಕಾಶ ಕಾಂಬಳೆ ಅವರು ಡಾ. ಅಂಬೇಡ್ಕರ್ ಮೂರ್ತಿಗೆ ಮಾಲಾರ್ಪಣೆ ಮಾಡುವುದರ ಮೂಲಕ ಸಂವಿಧಾನ ಶಿಲ್ಪಿ ಬಾಬಾಸಾಹೇಬ್ ಡಾ. ಬಿ.ಆರ್. ಅಂಬೇಡ್ಕರ್ ಅವರ 133ನೇ ಜನ್ಮದಿನಾಚರಣೆ ಆಚರಿಸಲಾಯಿತು. ಈ ಕಾರ್ಯಕ್ರಮದಲ್ಲಿ ರಾಜಪ್ಪ ಮಾದರ, ರಾಜು ಕಾಂಬಳೆ, ಅಶೋಕ ರಾಠೋಡ, ಶಿವರಾಜ ಕಾಂಬಳೆ, ಸಚಿನ ಪಾಟೀಲ, ಜಯಾನಂದ ನೀಲಣ್ಣನವರ ಮುಂತಾದವರು ಹಾಜರಿದ್ದರು.

ನಂತರ ಸಾರ್ವಜನಿಕರಿಗೆ ಸಿಹಿ ಹಂಚಲಾಯಿತು.